ಶಹಾಪುರ ತಾಲ್ಲೂಕಿನ ಗೋಗಿ ಗ್ರಾಮದಲ್ಲಿ ನೇಯ್ಗೆಕಾರರಿಗೆ ನಿವೇಶನ ಹಂಚುವ ಬಗ್ಗೆ

೧೬೨೨. ಶ್ರೀ ಶಿವಶೇಖರಪ್ಪ ಗೌಡ ಶಿರವಾಳ್ (ಶಹಾಪುರ).—ಮಾನ್ಯ ಬಂದರಂ ವಿಮಾನುಗಾರಿಕೆ ಮಂತ್ತು ಸಣ್ಣ ಪ್ರಮಾಣದ ಕೈಗಾರಿಕಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸಂವರೇ ?

ಅ) ಗುಲ್ಬರ್ಗಾ ಜಿಲ್ಲೆಯ ಶಹಾಪುರ ತಾಲ್ಲೂಕಿನ ಗೋಗಿ ಗ್ರಾಮದಲ್ಲಿ ನೇಯ್ಗೆಯವರಿಗಾಗಿ ನಿವೇಶನಗಳನ್ನು ಹಂಚಲು ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದವರು ಭೂ ಸ್ವಾಧೀನಪಡಿಸಿಕೊಂಡಿರುವುದು ನಿಜವೇ,

ಆ) ಹಾಗಿದ್ದಲ್ಲಿ, ಸದರಿ ಜಮೀನಿನ ವಾರಸುದಾರರಿಗೆ ಪರಿಹಾರ ನೀಡದೇ ಇರುವುದಂ ಹಾಗೂ ನಿವೇಶನ ಹಂಚದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ.

ಇ) ಈ ವರ್ಷವೇ ನಿವೇಶನ ಹಂಚಿ ಮನೆ ಕಟ್ಟಿಸಿ ಕೊಡುವಂತೆ ಕರ್ನಾಟಕ ಕೈಮಂಗ್ಗ ಅಭಿವೃದ್ಧಿ ನಿಗಮಕ್ಕೆ ಸರ್ಕಾರವು ಆದೇಶ ನೀಡುವುದೆ ?

ಶ್ರೀ ಎಂ. ರಘುಪತಿ (ಬಂದರು ವಿಮಾನುಗಾರಿಕೆ ಮತ್ತು ಸಣ್ಣ ಪ್ರಮಾಣದ ಕೈಗಾರಿಕಾ ಸಚಿವರಂ).—

ಅ) ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತವು ಡಚ್ ನೆರವಿನ ಯೋಜನೆಯ ೨ನೇ ಹಂತದಲ್ಲಿ ವಸತಿ ಮತ್ತು ಕಾರ್ಯಾಗಾರಗಳನ್ನು ನಿರ್ಮಿಸುವ ಸಲುವಾಗಿ ಗೋಗಿ ಗ್ರಾಮದಲ್ಲಿ ಭೂ ಸ್ವಾಧೀನಪಡಿಸಿಕೊಳ್ಳಲು ಕರ್ನಾಟಕ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ ಮಂಡಲಿಯನ್ನು ಕೋರಿದೆ. ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ.

ಆ) ಇಲ್ಲ.

ಇ) ಡಚ್ ನೆರವಿನ ೨ನೇ ಹಂತದ ಯೋಜನೆಯು ಸರ್ಕಾರದ ಪರಿಶೀಲನೆಯಲ್ಲಿರುವುದರಿಂದ ಈಗಲೇ ಯಾವುದೇ ನಿರ್ದೇಶನವನ್ನು ಕೊಡುವುದು ಸಾಧ್ಯವಾಗುವುದಿಲ್ಲ.

ಶ್ರೀ ಶಿವಶೇಖರಪ್ಪ ಗೌಡ ಶಿರವಾಳ್.— ಮಾನ್ಯ ಅಧ್ಯಕ್ಷರೇ, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದವರು ಮೂರು ವರ್ಷದ ಹಿಂದೆ ಈ ಗ್ರಾಮದಲ್ಲಿ ಭೂಮಿಯನ್ನು ವಶಪಡಿಸಿಕೊಂಡಿದ್ದಾರೆ. ಇನ್ನೂ ಅದರ ಬಗ್ಗೆ ಹಣ ಪಾವತಿಯಾಗಿಲ್ಲ. ಇದನ್ನು ಹೋದ ಅಸೆಂಬ್ಲಿಯಲ್ಲೂ ಕೂಡಾ ನಾನು ಪ್ರಸ್ತಾಪ ಮಾಡಿದ್ದೆ, ಆದರೆ ಅದಕ್ಕೆ ಸಮರ್ಪಕವಾದ ಉತ್ತರ ಬಂದಿಲ್ಲ. ಸದರಿ ಜಮೀನಿಗೆ ಇನ್ನೂ ಹಣ ಬಿಡುಗಡೆಯಾಗಿಲ್ಲ ಇದಕ್ಕೆ ಕಾರಣ ಏನು? ಡಚ್ ಯೋಜನೆ ಸಂಬಂಧದಲ್ಲಿ ಪರಿಶೀಲನೆ ಮಾಡಲಾಗುತ್ತಿದೆ ಎಂಬ ಮಾತನ್ನು ಹೇಳುತ್ತಿದ್ದಾರೆ. ಶಹಾಪುರ, ಗೋಗಿ ಮತ್ತು ಸಗರ್ ಗ್ರಾಮಗಳಲ್ಲಿರುವ ಬಡ ನೇಕಾರರಿಗೆ ಮನೆಗಳ ಅವಶ್ಯಕತೆ ಬಹಳವಾಗಿದೆ. ಕೂಡಲೇ ಇದರ ಬಗ್ಗೆ ಕ್ರಮ ತೆಗೆದುಕೊಂಡು ಅವರಿಗೆ ಮನೆಗಳ ವ್ಯವಸ್ಥೆ ಮಾಡಬೇಕೆಂದು ಮಾನ್ಯ ಸಚಿವರಲ್ಲಿ ವಿನಂತಿ ಮಾಡಿಕೊಳ್ಳುತ್ತೇನೆ.

ಶ್ರೀ ಎಂ. ರಘುಪತಿ.— ಮಾನ್ಯ ಅಧ್ಯಕ್ಷರೇ, ಆದ್ಯತೆಯ ಮೇರೆಗೆ ಈ ಬಗ್ಗೆ ಸೂಕ್ತ ಕ್ರಮ ತೆಗೆದುಕೊಂಡು ಎರಡು ತಿಂಗಳಲ್ಲಿ ಭೂ ಸ್ವಾಧೀನ ಮಾಡಿಕೊಂಡು ಕೆಲಸವನ್ನು ಪ್ರಾರಂಭ ಮಾಡುತ್ತೇವೆಂದು ಹೇಳುತ್ತೇನೆ.

ಶ್ರೀ ಶಿವಶೇಖರಪ್ಪ ಗೌಡ ಶಿರವಾಳ್.— ಈಗಾಗಲೇ, ಭೂಮಿಯನ್ನು ವಶಪಡಿಸಿಕೊಂಡಿದ್ದಾರೆ. ಹಣ ಬಿಡುಗಡೆಯಾಗಿಲ್ಲ. ವಶಪಡಿಸಿಕೊಂಡ ಭೂಮಿಗೆ ಹಣ ಬಿಡುಗಡೆ ಮಾಡಬೇಕು. ಅವರಿಗೆ ದುಡ್ಡು ಕೊಡದೇ ಹೋದರೆ ಕೆಲಸ ಹೇಗೆ ಮುಂದುವರಿಯುವುದಕ್ಕೆ ಸಾಧ್ಯ?

ಶ್ರೀ ಎಂ. ರಘುಪತಿ.— ಇದಕ್ಕೆ ಸೂಕ್ತ ವ್ಯವಸ್ಥೆ ಮಾಡುತ್ತೇನೆ ಮತ್ತು ಎಲ್ಲಾ ಕಾರ್ಯಕ್ರಮಗಳನ್ನು ಜಾರಿಗೆ ತರುವುದಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ.